ಮೂರನೇ ಅಪರ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ ರವರ ನ್ಯಾಯಾಲಯ,,
ಕನಕಪುರ

ಸಿ.ಸಿ ನಂ.716/2020

| | | | |
|---|---|---|---|
| **ಚಾಸಾ ಃ** | **1** | **ಪ್ರಾಸಾಃ-** | **1** |

| | |
|---|---|
| ಹೆಸರು | ಕಾಳಿರೇಗೌಡ |
| ತಂದೆಯ ಹೆಸರು | ಲೇಟ್ ಈರೇಗೌಡ |
| ವಯಸ್ಸು | **60** |
| ಉದ್ಯೋಗ | ವ್ಯವಸಾಯ |
| ವಿಳಾಸ | ಅಚ್ಚಲು ಗ್ರಾಮ |

\- - - - - - - - - - - - - - - - - - - - - - - - - - - - - -

**ದಿಃ13.11.2024ರಂದು ಸಾಕ್ಷಿಗೆ ಪ್ರಮಾಣ ವಚನ ಬೋದಿಸಲಾಯಿತು.**

<u>ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-</u>

ಆರೋಪಿತನ ಪರಿಚಯವಿದೆ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಆರೋಪಿ ಮತ್ತು ನಮ್ಮ ನಡುವೆ ಯಾವುದೇ ಗಲಾಟೆಯಾಗಿರುವುದಿಲ್ಲ. ಆರೋಪಿಯು ಯಾವುದೇ ಅಯುಧದಿಂದ ನನಗೆ ಯಾವುದೇ ಹಲ್ಲೆ ಮಾಡಿಲ್ಲ, ಅವಾಚ್ಯ ಶಬ್ದಗಳಿಂದ ಬೈದಿಲ್ಲ ಮತ್ತು ಪ್ರಾಣ ಬೆದರಿಕೆ ಹಾಕಿಲ್ಲ.

ನಾನು ಆರೋಪಿತನ ವಿರುದ್ಧ ಯಾವುದೇ ದೂರನ್ನು ನೀಡಿಲ್ಲ. ನನಗೆ ಈಗ ತೋರಿಸಿದ ದಾಖಲೆಯಲ್ಲಿ ನನ್ನ ಹೆಬ್ಬೆಟಿನ ಗುರುತು ಇರುತ್ತದೆ. ಆ ದಾಖಲೆಯು ದೂರಾಗಿದ್ದು, ಅದನ್ನು ನಿಪಿ-೧ ಎಂದು ಗುರುತಿಸಲಾಯಿತು.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ ಮತ್ತು ಏನನ್ನು ಜಪ್ತಿಪಡಿಸಿಲ್ಲ. ನನಗೆ ಈಗ ತೋರಿಸಿದ ಮತ್ತೊಂದು ದಾಖಲೆಯಲ್ಲಿ ನನ್ನ ಹೆಬ್ಬೆಟಿನ ಗುರುತು ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ನಿಪಿ-೨ ಎಂದು ಗುರುತಿಸಲಾಯಿತು.

ನಿಪಿ-೧ ಮತ್ತು ೨ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

ಪೊಲೀಸರು ನನ್ನನ್ನು ವಿಚಾರಣೆ ಮಾಡಿಲ್ಲ. ಅವರಿಗೆ ನಾನು ಮುಂದುವರೆದ ಹೇಳಿಕೆಯನ್ನು ನೀಡಿಲ್ಲ.

ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ಧವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಸರ್ಕಾರಿ ಅಭಿಯೋಜಕರು ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.

ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-

ದಿನಾಂಕ.**02.08.2019** ರಂದು ಆರೋಪಿತನ ವಿರುದ್ಧ ಪೊಲೀಸರಿಗೆ ನಿಪಿ-**1** ರಂತೆ ದೂರು ನೀಡಿರುತ್ತೇನೆ ಎಂದರೆ ಸರಿಯಲ್ಲ.

ದಿನಾಂಕ.**03.08.2019** ರಂದು ಬೆಳಿಗ್ಗೆ **10ಃ00** ರಿಂದ **10ಃ45** ಗಂಟೆ ಸಮಯದಲ್ಲಿ ಘಟನಾ ಸ್ಥಳದಲ್ಲಿ ಪೋಲೀಸರು ನನ್ನ ಸಮಕ್ಷಮ ನಿಪಿ-**2** ರಂತೆ ಪಂಚನಾಮ ಕ್ರಮ ಜರುಗಿಸಿ ಸನಿಕೆಯನ್ನು ಅಮಾನತ್ತು ಪಡಿಸಿಕೊಂಡು ನನ್ನ ಎಡಗೈ ಹೆಬ್ಬೆಟಿನ ಗುರುತು ಪಡೆದಿರುತ್ತಾರೆ ಎಂದರೆ ಸರಿಯಲ್ಲ.

ದಿನಾಂಕ.**09.08.2019** ರಂದು ಪೋಲೀಸರಿಗೆ ಮರುಹೇಳಿಕೆ ನೀಡಿದ್ದೇನೆಂದರೆ ಸರಿಯಲ್ಲ. ಸಾಕ್ಷಿಗೆ ತನ್ನ ಮರುಹೇಳಿಕೆಯನ್ನು ಓದಿ ಹೇಳಿದ್ದು, ಸಾಕ್ಷಿಯು ತನ್ನ ಮರುಹೇಳಿಕೆಯನ್ನು ತಿರಸ್ಕರಿಸಿದ್ದರಿಂದ ಅದನ್ನು ನಿಪಿ-**3** ಎಂದು ಗುರುತಿಸಲಾಯಿತು.

ಆರೋಪಿತನಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸರಿ ಇದೆ,**

**ಮೂರನೇ ಅಪರ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್ ಸಿ., ಕನಕಪುರ.**